ಯಾದಗಿರಿ ಜಿಲ್ಲೆಯ ಅಭಿವೃದ್ಧಿ ಬಗ್ಗೆ

513(30); ಡಾ॥ ಮಾಲಕರೆಡ್ಡಿ ಎ.ಬಿ. (ಯಾದಗಿರಿ)

ಅ) ಯಾದಗಿರಿ ಜಿಲ್ಲೆ ರಚನೆಯಾಗಿ ಐದು ವರ್ಷ ಕಳೆದರೂ ಅಭಿವೃದ್ಧಿಯಾಗದೇ ತೀರಾ ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಹಿಂದುಳಿದ ಈ ಜಿಲ್ಲೆಯ ಅಭಿವೃದ್ಧಿಗೆ ಸರ್ಕಾರ ಯಾವ ಕಾರ್ಯಕ್ರಮಗಳನ್ನು ಕೈಗೊಂಡಿದೆ?

ಇ) ಜಿಲ್ಲೆಯಲ್ಲಿ ಸರ್ಕಾರಿ ಕಚೇರಿಯ ಕಟ್ಟಡ ಸ್ಥಾಪನೆಯೂ ಸೇರಿದಂತೆ ಜಿಲ್ಲೆಯ ಸರ್ವಾಂಗೀಣ ಪ್ರಗತಿಗೆ ಕನಿಷ್ಟ 100 ಕೋಟಿ ರೂ.ಗಳ ವಿಶೇಷ ಪ್ಯಾಕೇಜ್ ಘೋಷಣೆ ಮಾಡಿ ಅಭಿವೃದ್ಧಿಗೆ ಅನುಕೂಲ ಮಾಡಿಕೊಡಲಾಗುವುದೇ?

ಈ) ಸಾರ್ವಜನಿಕ ಮತ್ತು ಆಡಳಿತದ ಹಿತದೃಷ್ಟಿಯಿಂದ ರಚಿಸಲಾದ ಹೊಸ ಜಿಲ್ಲೆಯ ಅಭಿವೃದ್ಧಿ ಇಲ್ಲಿಯವರೆಗೂ ಸರ್ಕಾರ ಅಭಿವೃದ್ಧಿಗೊಳಿಸದಿರಲು ಕಾರಣಗಳೇನು?

ಶ್ರೀ ಎಸ್.ಆರ್. ಪಾಟೀಲ್ (ಮಾನ್ಯ ಯೋಜನೆ, ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವರು)

ಅ) ಹೌದು. ಡಾ॥ ಡಿ.ಎಂ. ನಂಜುಂಡಪ್ಪ ವರದಿಯಲ್ಲಿಯೂ ಸಹ ಇದನ್ನು ಹಿಂದುಳಿದ ಪ್ರದೇಶವೆಂದು ಗುರುತಿಸಲಾಗಿದೆ.

ಆ) ಯಾದಗಿರಿ ಜಿಲ್ಲೆಯ ಸಮಗ್ರ ಅಭಿವೃದ್ಧಿಗಾಗಿ ಸರ್ಕಾರದಿಂದ ರೂ. 50.00 ಕೋಟಿಗಳ ವಿಶೇಷ ಅಭಿವೃದ್ಧಿ ಅನುದಾನ ಘೋಷಿಸಲಾಗಿದ್ದು, ಅದರಲ್ಲಿ ರೂ. 43.662 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.

ಡಾ॥ ಡಿ.ಎಂ. ನಂಜುಡಪ್ಪ ವರದಿಯನ್ವಯ ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ 2013–14 ರಿಂದ 2015–16ನೇ ಸಾಲಿನವರೆಗೆ ಒಟ್ಟು ರೂ. 17092.39 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಹೆಚ್‌ಕೆಆರ್‌ಡಿಬಿ ನಲ್ಲಿ ಯಾದಗಿರಿ ಜಿಲ್ಲೆಗೆ 2013–14, 2014–15 ಮತ್ತು 2015–16ನೇ ಸಾಲುಗಳಲ್ಲಿ ಒಟ್ಟು ರೂ. 182.27 ಕೋಟಿಗಳನ್ನು ಒದಗಿಸಲಾಗಿದೆ.

ಇ) ಮೇಲೆ ವಿವರಿಸಿದಂತೆ ವಿವಿಧ ಕಾರ್ಯಕ್ರಮಗಳಡಿ ಯಾದಗಿರಿ ಜಿಲ್ಲೆಗೆ ಅನುದಾನವನ್ನು ಒದಗಿಸಲಾಗುತ್ತಿದೆ.

ಈ) ಮೇಲೆ ವಿವರಿಸಿರುವ ಕಾರ್ಯಕ್ರಮಗಳ ಮೂಲಕ ಅನುದಾನವನ್ನು ಒದಗಿಸಿ ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿಯನ್ನು ಕೈಗೊಳ್ಳಲಾಗುತ್ತಿದೆ.

ವೈದ್ಯರ ಕೊರತೆ

514(31); ಡಾ॥ ಮಾಲಕರೆಡ್ಡಿ ಎ.ಬಿ. (ಯಾದಗಿರಿ)

ಅ) ರಾಜ್ಯದಲ್ಲಿ 100 ಮತ್ತು ಅದಕ್ಕಿಂತ ಹೆಚ್ಚಿನ ಹಾಸಿಗೆಗಳುಳ್ಳ ಸಾರ್ವಜನಿಕ ಆಸ್ಪತ್ರೆಗಳಲ್ಲಿ ನುರಿತ ವೈದ್ಯರು ಹಾಗೂ ಸಿಬ್ಬಂದಿಯಿಲ್ಲದೆ ಬಡ ರೋಗಿಗಳಿಗೆ ತೀವ್ರ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸದರಿ ಆಸ್ಪತ್ರೆಗಳಲ್ಲಿ ಅಗತ್ಯವಿರುವ ವೈದ್ಯರು ಮತ್ತಿತರ ಸಿಬ್ಬಂದಿಗಳು ಹಾಗೂ ಈಗ ಇರುವ ವೈದ್ಯರು ಮತ್ತಿತರ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು (ಎಲ್ಲಾ ಆಸ್ಪತ್ರೆಗಳ ತಾಲ್ಲೂಕುವಾರು, ಆಸ್ಪತ್ರೆವಾರು, ಹುದ್ದೆವಾರು ವಿವರಗಳನ್ನು ನೀಡುವುದು);

ಇ) 2012–15ನೇ ಸಾಲಿನ ಫೆಬ್ರವರಿ ಅಂತ್ಯದವರೆಗೆ ಈ ಆಸ್ಪತ್ರೆಗಳಿಗೆ ಪೂರೈಸಲಾದ ಜೆನರಿಕ್ ಮಾತ್ರೆಗಳು ಸೇರಿದಂತೆ ವಿವಿಧ ಬಗೆಯ ಔಷಧಿಗಳ ವಿವರ ಒದಗಿಸುವುದು (ಔಷಧವಾರು ವಿವರ ಒದಗಿಸುವುದು);